# ಜಾಗೀರಪನ್ನೂರಿನಲ್ಲಿ ಮದ್ಯಪಾನ ಮತ್ತು ಬಾಲ್ಯ ವಿವಾಹದ ವಿರುದ್ಧ ಜಾಗೃತಿ ಕಾರ್ಯಕ್ರಮ

**ಯುವ ಮಾರ್ಗ ಸುದ್ದಿ**

ಮಾನ್ವಿ,ಸೆ.25– ಯುವ ಸಮುದಾಯದಲ್ಲಿ ಹೆಚ್ಚುತ್ತಿರುವ ಮದ್ಯಪಾನ ಮತ್ತು ಮಾದಕ ವ್ಯಸನಗಳ ವಿರುದ್ಧ ಜಾಗೃತಿ ಮೂಡಿಸುವ ಉದ್ದೇಶದಿಂದ ಮಾನ್ವಿ ತಾಲೂಕಿನ ಜಾಗೀರಪನ್ನೂರು ಗ್ರಾಮದಲ್ಲಿ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಬೆಂಗಳೂರಿನ ಸಂತ ಜೋಸೆಫ್ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು, ಲೊಯೋಲ ಸಮಾಜಸೇವಾ ಕೇಂದ್ರ ಮಾನ್ವಿ ಮತ್ತು ಜಾಗೀರಪನ್ನೂರು ಆಶ್ರಯದಲ್ಲಿ ಈ ಕಾರ್ಯಕ್ರಮ ನಡೆಸಲಾಯಿತು.

ಬೆಂಗಳೂರಿನಿಂದ ಆಗಮಿಸಿದ್ದ ವಿದ್ಯಾರ್ಥಿಗಳ ತಂಡವು ಗ್ರಾಮದ ಪರಿಸರ, ರೈತರ ಜೀವನಶೈಲಿ ಮತ್ತು ಕೃಷಿ ಪದ್ಧತಿಗಳ ಬಗ್ಗೆ ಮಾಹಿತಿ ಪಡೆದರು. ಸಂಜೆ ನಡೆದ ಕಾರ್ಯಕ್ರಮದಲ್ಲಿ, ವಿದ್ಯಾರ್ಥಿಗಳು ನೃತ್ಯ ಪ್ರದರ್ಶನಗಳು ಮತ್ತು ನಾಟಕಗಳ ಮೂಲಕ ಜನರನ್ನು ಆಕರ್ಷಿಸಿದರು. ಈ ಮೂಲಕ ಮದ್ಯಪಾನ ಮತ್ತು ಮಾದಕ ವಸ್ತುಗಳ ಸೇವನೆಯ ದುಷ್ಪರಿಣಾಮಗಳ ಬಗ್ಗೆ ಸಂದೇಶ ನೀಡಿದರು.



ಇದೇ ವೇಳೆ, ಬಾಲ್ಯ ವಿವಾಹದಂತಹ ಸಾಮಾಜಿಕ ಪಿಡುಗುಗಳ ವಿರುದ್ಧವೂ ಜಾಗೃತಿ ಮೂಡಿಸಲಾಯಿತು. "ಮಕ್ಕಳು ಆಟವಾಡುವ ವಯಸ್ಸಿನಲ್ಲಿ ಮದುವೆ ಮಾಡಿಸುವುದನ್ನು ನಿಲ್ಲಿಸಿ, ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಅವರಿಗೆ ಸಹಾಯ ಮಾಡಿ" ಎಂದು ವಿದ್ಯಾರ್ಥಿಗಳು ನಾಟಕದ ಮೂಲಕ ಸಂದೇಶ ನೀಡಿದರು. ಶಿಕ್ಷಣದ ಮಹತ್ವ, ಮಹಿಳೆಯರ ಆರೋಗ್ಯ ಹಾಗೂ ನೈರ್ಮಲ್ಯಕ್ಕಾಗಿ ಸ್ಯಾನಿಟರಿ ಪ್ಯಾಡ್‌ಗಳ ಬಳಕೆಯ ಬಗ್ಗೆಯೂ ಮಾಹಿತಿ ನೀಡಲಾಯಿತು. ಮದ್ಯಪಾನ ಮತ್ತು ಮಾದಕ ವಸ್ತುಗಳ ವ್ಯಸನದಿಂದ ಯುವಕರು ತಮ್ಮ ಅಮೂಲ್ಯ ಜೀವನ ಹಾಳು ಮಾಡಿಕೊಳ್ಳುತ್ತಿದ್ದು, ಇದರಿಂದ ಅವರ ಕುಟುಂಬವೂ ಸಂಕಷ್ಟಕ್ಕೆ ಸಿಲುಕುತ್ತದೆ ಎಂದು ವಿದ್ಯಾರ್ಥಿಗಳು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಸಂತ ಜೋಸೆಫ್ ಕಾಲೇಜಿನ ಉಪನ್ಯಾಸಕರಾದ ಸನಾ ಖಾನ್, ಶಂಕರ್, ಡೆರಿಕ್, ಹಾಗೂ ಲೊಯೋಲ ಸಮಾಜಸೇವಾ ಕೇಂದ್ರದ ಸಿಬ್ಬಂದಿಯಾದ ರವೀಂದ್ರ ಜಾನೇಕಲ್, ಮರಿಯಪ್ಪ, ವಿಜಯಲಕ್ಷ್ಮೀ, ಅನ್ನಮ್ಮ, ತಿಮಲಮ್ಮ, ಬಸವರಾಜ ಹರವಿ ಮತ್ತು ಪ್ರಕಾಶ ಹುಲುಗುಂಚಿ ಉಪಸ್ಥಿತರಿದ್ದರು.